**ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಮರಿತಿಬ್ಬೇಗೌಡ ರವರು ನಿಯಮ-72ರಡಿ ನೀಡಿರುವ ಸೂಚನಾ ಪತ್ರಕ್ಕೆ ಸರ್ಕಾರದ ಉತ್ತರ**

**ವಿಷಯ:** ಅನುದಾನಿತ ಶಾಲಾ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕ/ಬೋಧಕೇತರರಿಗೆ ಕಾಲ್ಪನಿಕ ವೇತನ ಬಡ್ತಿಯನ್ನು ನೀಡಿರುವುದಿಲ್ಲ.ಈ ಸಂಬಂಧ ಸರ್ಕಾರದಿಂದ ರಚನೆಗೊಂಡ ಶ್ರೀಯುತ ಬಸವರಾಜ ಹೊರಟ್ಟಿಯವರ ಸಮಿತಿಯು ನೀಡಿರುವ ವರದಿಯ ಬಗ್ಗೆ ಇದುವರೆವಿಗೂ ಯಾವುದೇ ಕ್ರಮ ವಹಿಸದೆ ಇರುವುದರಿಂದ ಉಂಟಾಗಿರುವ ಗಂಭೀರ ಸಮಸ್ಯೆ ಕುರಿತು ಪ್ರಸ್ತಾಪಿಸಿರುತ್ತಾರೆ.

**ಉತ್ತರ:**

ಅನುದಾನ ಸಂಹಿತೆಯ ಪ್ರಕಾರ ಅನುದಾನಕ್ಕೊಳಪಟ್ಟ ಸಿಬ್ಬಂದಿಗೆ ಅನುದಾನ ದೊರೆತ ದಿನಾಂಕದಿಂದ ಮಾತ್ರ ಕನಿಷ್ಟ ವೇತನ ನಿಗದಿ ಮಾಡಬೇಕೆಂದು. ಹಿಂದಿನ ಸೇವಾವಧಿಯನ್ನು ಯಾವುದೇ ಸೇವಾ ಸೌಲಭ್ಯಕ್ಕೆ ಪರಿಗಣಿಸುವಂತಿಲ್ಲ. ಈ ಸಂಬಂಧ ಸರ್ಕಾರವು ದಿನಾಂಕ:01-06-1995 ರಿಂದಲೇ ಪೂರ್ವಾನ್ವಯವಾಗಿ ಜಾರಿಗೆ ಬರುವಂತೆ ಕರ್ನಾಟಕ ಖಾಸಗಿ ಅನುದಾನಿತ ಶೈಕ್ಷಣಿಕ ಸಂಸ್ಥೆಗಳ ಸಿಬ್ಬಂಧಿಗಳ (ವೇತನ. ನಿವೃತ್ತಿ ವೇತನ ಮತ್ತು ಇತರೇ ಸೌಲಭ್ಯಗಳ ನಿಯಂತ್ರಣ) ಅಧಿನಿಯಮ 2014ನ್ನು ಜಾರಿಗೆ ತರಲಾಗಿದೆ.

ಈ ಅಧಿನಿಯಮವನ್ನು ಅನುದಾನಿತ ಶಿಕ್ಷಣ ಸಂಸ್ಥೆಗಳ ಸಿಬ್ಬಂದಿಗಳು ಪ್ರಶ್ನಿಸಿರುವ ರಿಟ್ ಅರ್ಜಿಗಳಾದ 21216/2014 ಮತ್ತು 14307/2014 ಮತ್ತು ತತ್ಸಂಬಂಧದ ಪ್ರಕರಣಗಳಲ್ಲಿ ಮಾನ್ಯ ಉಚ್ಚನ್ಯಾಯಾಲಯವು ದಿನಾಂಕ:10-07-2015ರಂದು ನೀಡಿದ ತೀರ್ಪಿನಲ್ಲಿ ಸದರಿ ಅಧಿನಿಯಮವನ್ನು "struck down " ಮಾಡಿರುತ್ತದೆ.

ಮೇಲಿನ ಮಾನ್ಯ ನ್ಯಾಯಾಲಯದ ತೀರ್ಪನ್ನು ಪ್ರಶ್ನಿಸಿ ಸರ್ಕಾರವು ಮಾನ್ಯ ಉಚ್ಚನ್ಯಾಯಾಲಯ , ಬೆಂಗಳೂರು ಇಲ್ಲಿ ರಿಟ್ ಅಪೀಲ್ ಸಂಖ್ಯೆ:2476/2015 ಮತ್ತು 2467/2015ನ್ನು ದಾಖಲಿಸಿದೆ. ಮೇಲಿನ ರಿಟ್ ಅರ್ಜಿಗಳಲ್ಲಿ ನೀಡಿದ ತೀರ್ಪಿಗೆ ದಿನಾಂಕ:27-11-2015ರಂದು ತಡೆಯಾಜ್ಞೆ ನೀಡಿರುತ್ತದೆ.ಸದರಿ ತಡೆಯಾಜ್ಞೆಯು ಪ್ರಸ್ತುತ ಜಾರಿಯಲ್ಲಿದ್ದು. ಪ್ರಕರಣವು ಮಾನ್ಯ ನ್ಯಾಯಾಲಯದಲ್ಲಿ ಬಾಕಿಯಿರುತ್ತದೆ.

ಶ್ರೀ ಬಸವರಾಜ ಹೊರಟ್ಟಿ ರವರ ಅಧ್ಯಕ್ಷತೆಯಲ್ಲಿನ ಸಮಿತಿಯು ಸಲ್ಲಿಸಿರುವ ವರದಿ ಮತ್ತು ಇಲಾಖೆಗಳಲ್ಲಿನ ವಾಸ್ತವ ಅಂಕಿಅಂಶಗಳನ್ನು ಪರಿಶೀಲಿಸಲಾಗಿ.ಹಾಲಿ ನೀಡಲಾಗುತ್ತಿರುವ ವೇತನಕ್ಕೆ ಅನುದಾನ ರಹಿತ ಅವಧಿಯನ್ನು ಪರಿಗಣನೆಗೆ ತೆಗೆದುಕೊಂಡು ವೇತನವನ್ನು ಪರಿಷ್ಕರಿಸಿದಲ್ಲಿ ಹೆಚ್ಚುವರಿಯಾಗಿ ವಾರ್ಷಿಕವಾಗಿ ರೂ.359.87ಕೋಟಿಗಳ ಅನುದಾನವು ಬೇಕಾಗುತ್ತದೆ. ಆದರೆ. ಅವರಿಗೆ ಹಿಂಬಾಕಿ ಮತ್ತು ಪಿಂಚಣಿಗಾಗಿ ತಗಲುವ ಅಂದಾಜು ವೆಚ್ಚವು ಪ್ರಸ್ತಾಪಿತ ರೂ.359.87 ಕೋಟಿಗಳಲ್ಲಿ ಒಳಗೊಂಡಿರುವುದಿಲ್ಲ. ಸದರಿ ಮೊತ್ತದಂತೆಯೇ ಮುಂದಿನ 10 ವರ್ಷಗಳಿಗೆ ಅಂದಾಜಿಸಿದಲ್ಲಿ ರೂ.3598.7ಕೋಟಿಗಳಷ್ಟು ಆಗುತ್ತದೆ. ಆದುದರಿಂದ ಆರ್ಥಿಕ ಇಲಾಖೆಯೊಂದಿಗೆ ಸಮಾಲೋಚಿಸಲು ವೆಚ್ಚದ ವಾಸ್ತವಾಂಶಗಳನ್ನು ಕ್ಷೇತ್ರ ಇಲಾಖೆಗಳಿಂದ ಕ್ರೋಢೀಕರಿಸಲಾಗುತ್ತಿದೆ.

ಕರ್ನಾಟಕ ಶಿಕ್ಷಣ ಸಂಸ್ಥೆಗಳು ( ಖಾಸಗಿ ಅನುದಾನಿತ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಂಸ್ಥೆಗಳ ನೌಕರರ ನೇಮಕಾತಿ ಮತ್ತು ಸೇವಾ ಷರತ್ತು ಹಾಗೂ ನಿಬಂಧನೆಗಳು) ನಿಯಮಗಳು 1999ರ ಅನುಬಂಧ-II (3) ರನ್ವಯ ಹಿಂದಿನ ಅನುದಾನರಹಿತ ಸೇವಾವಧಿಯನ್ನು ಯಾವುದೇ ಸೇವಾ ಸೌಲಭ್ಯಕ್ಕೆ ಪರಿಗಣಿಸುವಂತಿಲ್ಲ. ಅನುದಾನಕ್ಕೊಳಪಟ್ಟ ಸಿಬ್ಬಂದಿಗಳಿಗೆ ಅನುದಾನ ದೊರೆತ ದಿನಾಂಕದಿಂದ ಕನಿಷ್ಠ ವೇತನ ನಿಗದಿ ಮಾಡಿ , ವೇತನವನ್ನು ವಿತರಿಸುತ್ತಿರುವುದರಿಂದ ಅನುದಾನಿತ ಶಿಕ್ಷಕರಿಗೆ ಯಾವುದೇ ಅನ್ಯಾಯವಾಗಿರುವುದಿಲ್ಲ.

ಸಂಖ್ಯೆ:ಇಪಿ 86ಎಸ್ಇಎಸ್ 2020

**(ಎಸ್. ಸುರೇಶ್ ಕುಮಾರ್ )**
ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ
ಸಕಾಲ ಸಚಿವರು